ಸಾರ್ವಜನಿಕ ಶಿಕ್ಷಣ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
Karnataka School Quality Assessment & Accreditation Council
ಕೆ.ಎಸ್.ಇ.ಎ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacbangalore@gmail.com & ksqaacbengaluru@gmail.com

ಸಂಖ್ಯೆ: K1/KSQAAC/5 ಮತ್ತು 8ನೇ.ಮೌ.ವ್ಯಾ.ಪ್ರ/05(C)/2022-23 ದಿನಾಂಕ: 20.03.2023

## ಜ್ಞಾಪನ

ವಿಷಯ:- 2022-23ನೇ ಸಾಲಿನಲ್ಲಿ ರಾಜ್ಯ ಪಠ್ಯಕ್ರಮದ ಎಲ್ಲಾ ಶಾಲೆಗಳಲ್ಲಿನ 5 ಮತ್ತು 8ನೇ ತರಗತಿ ವಿದ್ಯಾರ್ಥಿಗಳಿಗೆ ನಡೆಸಲಾಗುತ್ತಿರುವ ಮೌಲ್ಯಾಂಕನಕ್ಕೆ ಸಂಬಂಧಿಸಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸ್ಥಳೀಯ ಪತ್ರಿಕೆ ಹಾಗೂ ಮಾಧ್ಯಮಗಳಲ್ಲಿ ವ್ಯಾಪಕ ಪ್ರಚಾರ ನೀಡುವ ಬಗ್ಗೆ.

ಉಲ್ಲೇಖ :-
1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಕಛೇರಿ ಸುತ್ತೋಲೆ ಸಂಖ್ಯೆ: E-870867-DPII-PIOC7-2(PLM)/3/2022, ದಿನಾಂಕ: 12.12.2022.
2. ಸರ್ಕಾರಿ ಆದೇಶ ಸಂಖ್ಯೆ: ಇಪಿ 89 ಪಿಬಿಎಸ್ 2023, ಬೆಂಗಳೂರು, ದಿನಾಂಕ: 17.02.2023
3. ಈ ಕಛೇರಿ ಮಾರ್ಗಸೂಚಿ ಸಂಖ್ಯೆ: K1/KSQAAC/5 ಮತ್ತು 8ನೇ ವಾ.ಪ/05/2022-23, ದಿನಾಂಕ: 27.02.2023
4. ಘನ ಉಚ್ಛ ನ್ಯಾಯಾಲಯದ Writ Appeal No.: WA293/2023

~*~*~*~

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ 2022-23ನೇ ಸಾಲಿನಲ್ಲಿ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ 5 ಮತ್ತು 8 ನೇ ತರಗತಿ ವಿದ್ಯಾರ್ಥಿಗಳಿಗೆ ದಿನಾಂಕ: 27.03.2023 ರಿಂದ ಮೌಲ್ಯಾಂಕನವನ್ನು ನಡೆಸಲು ಘನ ಉಚ್ಛ ನ್ಯಾಯಾಲಯವು ಅವಕಾಶ ಕಲ್ಪಿಸಿದ್ದು, ಅದರಂತೆ 5 ನೇ ತರಗತಿ ವಿದ್ಯಾರ್ಥಿಗಳಿಗೆ **ದಿನಾಂಕ: 27.03.2023 ರಿಂದ 30.03.2023 ರವರೆಗೆ** ಮತ್ತು 8 ನೇ ತರಗತಿ ವಿದ್ಯಾರ್ಥಿಗಳಿಗೆ **ದಿನಾಂಕ: 27.03.2023 ರಿಂದ 01.04.2023 ರವರೆಗೆ** ಮೌಲ್ಯಾಂಕನವನ್ನು ನಡೆಸಲಾಗುತ್ತಿದೆ.

ಸದರಿ ಮೌಲ್ಯಾಂಕನಕ್ಕೆ ಸಂಬಂಧಿಸಿದಂತೆ ಈ ಪತ್ರದೊಂದಿಗೆ ಲಗತ್ತಿಸಿರುವ ಪತ್ರಿಕಾ ಪ್ರಕಟಣೆಯ ವಿಷಯವನ್ನು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ) ಮತ್ತು ತಾಲ್ಲೂಕು ಕ್ಷೇತ್ರಶಿಕ್ಷಣಾಧಿಕಾರಿಗಳು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸ್ಥಳೀಯ ಪತ್ರಿಕೆ ಹಾಗೂ ಮಾಧ್ಯಮಗಳಲ್ಲಿ ವ್ಯಾಪಕ ಪ್ರಚಾರವನ್ನು ನೀಡುವಂತೆ ಮತ್ತು ಸದರಿ ಮಾಹಿತಿಯನ್ನು ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರು / ಪ್ರಾಂಶುಪಾಲರು 5 ಮತ್ತು 8ನೇ ತರಗತಿಯ ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ತಿಳಿಸುವಂತೆ ಕ್ರಮಕೈಗೊಳ್ಳಲು ತಿಳಿಸಿದೆ. ಪ್ರಕಟವಾದ ಪತ್ರಿಕೆಯ ಪ್ರತಿಯನ್ನು ಈ ಕಛೇರಿಗೆ ಕಳುಹಿಸಲು ತಿಳಿಸಿದೆ.

20/3/23
ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ.

**ಪ್ರತಿಯನ್ನು:-**
1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ) ರವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ 5 ಮತ್ತು 8ನೇ ತರಗತಿ ಮೌಲ್ಯಾಂಕನದ ಜಿಲ್ಲಾ ಹಾಗೂ ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು ಮತ್ತು ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
4. ಶಾಲಾ ಮುಖ್ಯ ಶಿಕ್ಷಕರು / ಪ್ರಾಂಶುಪಾಲರಿಗೆ ಸೂಕ್ತ ಕ್ರಮಕ್ಕಾಗಿ (ಕ್ಷೇತ್ರಶಿಕ್ಷಣಾಧಿಕಾರಿಗಳ ಮೂಲಕ).
5. ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಮಾಹಿತಿಗಾಗಿ (ಶಾಲಾ ಮುಖ್ಯ ಶಿಕ್ಷಕರು / ಪ್ರಾಂಶುಪಾಲರ ಮೂಲಕ)

**ಪ್ರತಿಯನ್ನು ಗೌರವಪೂರ್ವಕವಾಗಿ ಮಾಹಿತಿಗಾಗಿ,**
1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ,
2. ಮಾನ್ಯ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು ರವರಿಗೆ,
3. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲ್ಬುರ್ಗಿ ಮತ್ತು ಧಾರವಾಡ ರವರಿಗೆ.
4. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ,
5. ಕಛೇರಿ ಪ್ರತಿ.

# 5 ಮತ್ತು 8ನೇ ತರಗತಿಯ ಮೌಲ್ಯಾಂಕನ ಕುರಿತು ಪ್ರಕಟಣೆ

- 5 ಮತ್ತು 8ನೇ ತರಗತಿಯ ಮೌಲ್ಯಾಂಕನದಲ್ಲಿ ಯಾವುದೇ ವಿದ್ಯಾರ್ಥಿಯನ್ನು ಅನುತ್ತೀರ್ಣಗೊಳಿಸುವುದಿಲ್ಲ, ಎಲ್ಲಾ ವಿದ್ಯಾರ್ಥಿಗಳನ್ನು ಮುಂದಿನ ತರಗತಿಗೆ ತೇರ್ಗಡೆಗೊಳಿಸಲಾಗುವುದು.
- 5 ಮತ್ತು 8ನೇ ತರಗತಿಯ ಮೌಲ್ಯಾಂಕನವು ವಾರ್ಷಿಕ ಪರೀಕ್ಷೆಯಾಗಿರುವುದಿಲ್ಲ. ಇದು ಕೇವಲ ಮೌಲ್ಯಾಂಕನವಾಗಿರುತ್ತದೆ.
- ಈ ಮೌಲ್ಯಾಂಕನದ ಮೂಲಕ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟ, ಕಲಿಕಾ ನ್ಯೂನ್ಯತೆ, ಕಲಿಕಾ ಪ್ರಗತಿಗಳನ್ನು ತಿಳಿದುಕೊಂಡು ಮುಂದಿನ ಶೈಕ್ಷಣಿಕ ವರ್ಷಕ್ಕೆ ಕಲಿಕಾ ಕೊರತೆಯನ್ನು ನೀಗಿಸಲು ಶೈಕ್ಷಣಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದು ಇದರ ಉದ್ದೇಶವಾಗಿದೆ ಎಂಬುದನ್ನು ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ತಿಳಿಸಲಾಗಿದೆ.
- ಈ ಮೌಲ್ಯಾಂಕನದ ಫಲಿತಾಂಶವನ್ನು ಸಂಬಂಧಿಸಿದ ಪೋಷಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಮಾತ್ರ ತಿಳಿಸಲಾಗುವುದು. ಆ ಮೂಲಕ ಫಲಿತಾಂಶದ ಗೌಪ್ಯತೆಯನ್ನು ಕಾಪಾಡಲಾಗುವುದು.
- ಪಠ್ಯಪುಸ್ತಕವನ್ನಾಧರಿಸಿ ಮೌಲ್ಯಾಂಕನಕ್ಕೆ ಪ್ರಶ್ನೆಗಳನ್ನು ಸಿದ್ಧಪಡಿಸಲಾಗಿದೆ.

# Class 5 & 8 Assessment related note

- Class 5 & 8 Assessment does not entail detention of any student in the same class, all the students will be promoted to the next class. The failure will be totally nil
- Class 5 & 8 Assessment is not an annual examination. It is just an assessment.
- The students and parents are informed that the objective of this assessment is to know the students learning deficiencies, learning progress and to carry out educational programmes to eliminate the learning deficiency in the next academic year.
- The result of this assessment will be communicated only to the concerned parents and students. Thereby the confidentiality of the result will be maintained.
- The questions framed for the assessment are derived from the Textbook.